## 77. ರೈತರ ಖಾತೆಗೆ ಶೀಘ್ರ 5 ಸಾವಿರ

ಮೆಕ್ಕೆಜೋಳ ಬೆಳೆದು ಸಂಕಷ್ಟದಲ್ಲಿರುವ ರೈತರ ಖಾತೆಗೆ ಸರ್ಕಾರ ರೂ.5 ಸಾವಿರ ಪರಿಹಾರ ಜಮೆ ಮಾಡಲಿದೆ ಎಂದು ಕೃಷಿ ಸಚಿವ ಬಿ.ಸಿ.ಪಾಟೀಲ ಹೇಳಿದರು. ಮುಖ್ಯಮಂತ್ರಿ ರಾಜ್ಯದ 10 ಲಕ್ಷ ರೈತರಿಗೆ ರೂ.500 ಕೋಟಿಗಳಲ್ಲಿ ಮೆಕ್ಕೆಜೋಳಕ್ಕೆ ಪರಿಹಾರ ನೀಡುವ ಐತಿಹಾಸಿಕ ಘೋಷಣೆ ಮಾಡಿದ್ದಾರೆ. ರಾಜ್ಯದಲ್ಲಿ ರೈತರು ಕಳೆದ ಬಾರಿ ಮುಂಗಾರಿನಲ್ಲಿ 45,25,185 ಕ್ವಿಂಟಲ್, ಹಿಂಗಾರಿನಲ್ಲಿ 6,97,597 ಕ್ವಿಂಟಲ್ ಮೆಕ್ಕೆಜೋಳ ಬೆಳೆದಿದ್ದಾರೆ. ಈ ರೈತರಿಗೆ ತಲಾ ಐದು ಸಾವಿರ ರೂ. ಪರಿಹಾರ ಬರಲಿದೆ. ಇದಕ್ಕೆ ಮಾರ್ಗಸೂಚಿ ಸಿದ್ಧವಾಗಿದೆ. ರೈತರ ಪಂಪ್‌ಸೆಟ್‌ಗೆ ಮೀಟರ್ ಅಳವಡಿಸುವ ಕುರಿತಂತೆ ವಿದ್ಯುತ್ ಬಿಲ್ ಕಾಯ್ದೆ ತಿದ್ದುಪಡಿಗೆ ಕೇಂದ್ರ ಸರ್ಕಾರ ಕೊಟ್ಟ ಎಲ್ಲ ಸಲಹೆಗಳನ್ನು ಒಪ್ಪಲು ಸಾಧ್ಯವಾಗಲ್ಲ. ಅದಕ್ಕೆ ಪ್ರತ್ಯೇಕತೆಗೆ ನಮ್ಮತನ ಉಳಿಸಿಕೊಳ್ಳುತ್ತೇವೆ. ಮುಖ್ಯಮಂತ್ರಿಯವರು ಸಮಿತಿ ರಚಿಸಿದ್ದಾರೆ. ಸಮಿತಿ ವರದಿಯನ್ನು ಕೇಂದ್ರಕ್ಕೆ ಕಳುಹಿಸಲಿದ್ದಾರೆ ಹಾಗೂ ಗ್ರಾಮ ಪಂಚಾಯತ್ ಸದಸ್ಯರ ನಾಮನಿರ್ದೇಶನ ವಿಚಾರ ಕ್ಯಾಬಿನೆಟ್ ಮುಂದೆ ಬರಲಿದೆ ಎಂದರು.

ಆಧಾರ:ಉದಯವಾಣಿ, ದಿನಾಂಕ:28.05.2020